ಕರ್ನಾಟಕ ವಿಧಾನ ಸಭೆ, ಸಂಶೋಧನಾ ಮತ್ತು ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE : 20/5/2020

# ರಾಜ್ಯ ಹೈಕೋರ್ಟ್‌ಗೆ ಕೃಷ್ಣ ಭಟ್ ನೇಮಕ

20/5/20

ನವದೆಹಲಿ: ನ್ಯಾಯಮೂರ್ತಿ ಪಿ.ಕೃಷ್ಣ ಭಟ್ ಅವರನ್ನು ಕೊನೆಗೂ ಕರ್ನಾಟಕ ಹೈಕೋರ್ಟ್‌ನ ಹೆಚ್ಚುವರಿ ನ್ಯಾಯಮೂರ್ತಿಯಾಗಿ ಕೇಂದ್ರ ಸರ್ಕಾರ ನೇಮಕ ಮಾಡಿದೆ. ಅವರು ಅಧಿಕಾರ ವಹಿಸಿಕೊಂಡಂದಿನಿಂದ ಮುಂದಿನ ಎರಡು ವರ್ಷಗಳ ಅವಧಿಗೆ ಹೈಕೋರ್ಟಿನಲ್ಲಿ ಹೆಚ್ಚುವರಿ ನ್ಯಾಯಮೂರ್ತಿಯಾಗಿ ಕಾರ್ಯನಿರ್ವಹಿಸಲಿದ್ದಾರೆ.



ಸಂವಿಧಾನದ 224ನೇ ವಿಧಿಯನುಸಾರ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರು ಈ ನೇಮಕ ಮಾಡಿರುವುದಾಗಿ ಎಂದು ಕೇಂದ್ರ ಕಾನೂನು ಸಚಿವಾಲಯ ಅಧಿಸೂಚನೆ ಹೊರಡಿಸಿದೆ. ಕೃಷ್ಣ ಭಟ್ ಅವರನ್ನು ನ್ಯಾಯಮೂರ್ತಿಯಾಗಿ ನೇಮಕ ಮಾಡುವಂತೆ ಸುಪ್ರೀಂಕೋರ್ಟಿನ ಕೊಲಿಜಿಯಂ 2016ರ ಆಗಸ್ಟ್‌ನಲ್ಲೇ ಶಿಫಾರಸು ಮಾಡಿತ್ತು. ಆದರೆ ಮಹಿಳಾ ನ್ಯಾಯಮೂರ್ತಿಯೊಬ್ಬರ ಆರೋಪದ ಹಿನ್ನೆಲೆಯಲ್ಲಿ ಅವರ ಕಡತವನ್ನು ಕೇಂದ್ರ ಸರ್ಕಾರ ತಡೆಹಿಡಿದಿತ್ತು.

2017ರ ಏಪ್ರಿಲ್ 6ರಂದು ಸುಪ್ರೀಂಕೋರ್ಟ್ ಕೊಲಿಜಿಯಮ್ ಕೃಷ್ಣ ಭಟ್ ಅವರನ್ನು ನ್ಯಾಯಮೂರ್ತಿಯಾಗಿ ಮಾಡುವಂತೆ ಇನ್ನೊಮ್ಮೆ ಶಿಫಾರಸು ಮಾಡಿತ್ತು. ಈ ಸಂದರ್ಭದಲ್ಲಿ ಕೊಲಿಜಿಯಂ ಶಿಫಾರಸನ್ನು ಮರುಪರಿಶೀಲಿಸುವಂತೆ ಕೇಂದ್ರ ಸರ್ಕಾರ ಕೋರಿತ್ತು.

ಆದರೆ ಕೇಂದ್ರದ ಮನವಿಯನ್ನು ಕೊಲಿಜಿಯಂ ತಿರಸ್ಕರಿಸಿದ ನಂತರ ಕಳೆದ ವಾರ ಕೃಷ್ಣ ಭಟ್ ಅವರನ್ನು ಹೆಚ್ಚುವರಿ ನ್ಯಾಯಮೂರ್ತಿಯಾಗಿ ನೇಮಕ ಮಾಡುವ ಕಡತಕ್ಕೆ ಕೇಂದ್ರ ಅನುಮೋದನೆ ನೀಡಿದೆ.